# ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 09 ಪಿಜಿಸಿ 2017

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 18.03.2017.

## ಅಧಿಸೂಚನೆ

ವಿಷಯ : 2017-18ನೇ ಸಾಲಿನಲ್ಲಿ ಹೊಸದಾಗಿ ಶಾಶ್ವತ ಅನುದಾನರಹಿತವಾಗಿ ಪ್ರಾಥಮಿಕ, ಪ್ರೌಢಶಾಲೆಗಳನ್ನು ಹಾಗೂ ಪದವಿಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ನೋಂದಣಿಯನ್ನು ನೀಡುವ ಬಗ್ಗೆ.

ಓದಲಾಗಿದೆ:

1. ಕರ್ನಾಟಕ ಶಿಕ್ಷಣ ಕಾಯಿದೆ 1983 ಸೆಕ್ಷನ್-30 ಮತ್ತು 31
2. ಕರ್ನಾಟಕ ಶಿಕ್ಷಣ ಸಂಸ್ಥೆಗಳು(ವರ್ಗೀಕರಣ ಮತ್ತು ನೋಂದಣಿ) ನಿಯಮ-1997.
3. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ-2009
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 369 ಪಿಜಿಸಿ 2014 ದಿನಾಂಕ:11.11.2014.
5. ಸರ್ಕಾರದ ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಇಡಿ 369 ಪಿಜಿಸಿ 2014 ದಿನಾಂಕ: 02.05.2015.
6. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 359 ಪಿಜಿಸಿ 2015 ದಿ:05.09.2015.
7. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 549 ಪಿಜಿಸಿ 2015 ದಿ:02.11.2015.
8. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 617 ಪಿಜಿಸಿ 2015 ದಿ:23.12.2015
9. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 140 ಪಿಜಿಸಿ 2016 ದಿ:20.05.2016
10. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 136 ಟಿಪಿಯು 1999 ದಿ:09.10.2006
11. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 09 ಪಿಜಿಸಿ 2017; ದಿ:07.01.2017.

** ** ** **

2017-18ನೇ ಶೈಕ್ಷಣಿಕ ಸಾಲಿನಿಂದ ಅನುದಾನರಹಿತವಾಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು ಹಾಗೂ ಪದವಿಪೂರ್ವ ಕಾಲೇಜುಗಳನ್ನು ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ಅರ್ಹ ನೋಂದಾಯಿತ ಸಂಸ್ಥೆಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಇಲಾಖಾ ವೆಬ್‌ಸೈಟ್‌ನಲ್ಲಿ ಸಲ್ಲಿಸಲು ಮೇಲೆ ಕ್ರಮ ಸಂಖ್ಯೆ: (11)ರಲ್ಲಿ ಓದಲಾದ ಆದೇಶದಲ್ಲಿ ಅವಕಾಶ ಕಲ್ಪಿಸಲಾಗಿತ್ತು. (ವೆಬ್‌ಸೈಟ್ ವಿಳಾಸ: WWW.Schooleducation.Kar.nic.in) ಮತ್ತು ದಿನಾಂಕ:31.01.2017ರೊಳಗೆ ಆನ್‌ಲೈನ್ ಮೂಲಕ ಸ್ವೀಕರಿಸಲಾದ ಅರ್ಜಿಗಳನ್ನು ಸದರಿ ಅಧಿಸೂಚನೆಯಲ್ಲಿ ತಿಳಿಸಿರುವ ವೇಳಾಪಟ್ಟಿಯಂತೆ ಕ್ರಮವಹಿಸುವುದು.

ಇಂದಿನಿಂದ ಹೊಸದಾಗಿ ಶಾಲಾ ಕಾಲೇಜುಗಳನ್ನು ಪ್ರಾರಂಭಿಸಲು ನಿಗಧಿತ ಅವಧಿಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ:31.03.2017ರವರೆಗೆ ವಿಸ್ತರಿಸಿದೆ. ದಿನಾಂಕ:31.03.2017ರವರೆಗೆ ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಗಳನ್ನು ವಿಲೇಗೊಳಿಸಲು ಅನುಸರಿಸಬೇಕಾದ ವೇಳಾಪಟ್ಟಿ ಈ ಕೆಳಗಿನಂತಿದೆ ಮತ್ತು ಮೇಲೆ ಓದಲಾದ ಕ್ರಮ ಸಂಖ್ಯೆ: (11)ರಲ್ಲಿ ಅಧಿಸೂಚನೆಯಲ್ಲಿಯೂ ಎಲ್ಲಾ ಷರತ್ತು ಮತ್ತು ನಿಯಮಗಳು ಯಥಾವತ್ತಾಗಿ ಅನ್ವಯಿಸುತ್ತದೆ.

| ಕ್ರ.ಸಂ | ವಿಷಯ | ನಿಗಧಿಪಡಿಸಿದ ದಿನಾಂಕ |
|---|---|---|
| | ಕಡೆಯ ದಿನಾಂಕ | |

**2017-18ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಸಂಬಂಧ ಅನುಸರಿಸಬೇಕಾದ ವೇಳಾಪಟ್ಟಿ**

| ಕ್ರ.ಸಂ | ಘಟನಾವಳಿಗಳ ವಿವರ | ದಿನಾಂಕ |
|---|---|---|
| 1 | ಅರ್ಹ ಟ್ರಸ್ಟ್ / ಸಂಸ್ಥೆಯ ಆಡಳಿತ ಮಂಡಳಿಗಳು ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅರ್ಜಿ ಶುಲ್ಕ ರೂ.36,000/- ದೊಂದಿಗೆ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಕಡೆಯ ದಿನಾಂಕ (Form - Iರಲ್ಲಿ) - (ನಿಯಮ- 4 ರಂತೆ). | 31-03-2017 |
| 2 | ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅರ್ಜಿ ಸಲ್ಲಿಸಿರುವ ಹಾಗೂ ರಿಜಿಸ್ಟರ್‌ನಲ್ಲಿ ನೋಂದಾಯಿಸಲ್ಪಟ್ಟ ಟ್ರಸ್ಟ್ / ಸೊಸೈಟಿಗಳಿಗೆ ನಿರ್ದೇಶನಾಲಯದಿಂದ Letter of intent ನೀಡಲುಕೊನೆಯ ದಿನಾಂಕ | 20-04-2017 |
| 3 | ನಿರ್ದೇಶನಾಲಯವು ನೀಡಿರುವLetter of intentಗೆ ಆಡಳಿತ ಮಂಡಳಿಯವರು 2017-18ನೇ ಶೈಕ್ಷಣಿಕ ಸಾಲಿನಲ್ಲಿಯೇ ಖಾಸಗಿ ಪದವಿ ಪೂರ್ವಕಾಲೇಜನ್ನು ಪ್ರಾರಂಭಿಸಲು ಉದ್ದೇಶಿಸಿ ನಿಯಮ- 4ರಂತೆಸಿದ್ಧತೆ ಮಾಡಿಕೊಂಡಿರುವ ಬಗ್ಗೆ ಅಗತ್ಯ ದಾಖಲೆಗಳೊಂದಿಗೆ ನಿಗದಿತ ನಮೂನೆಯೊಂದಿಗೆ ಪ್ರಸ್ತಾವನೆಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವ ಕೊನೆಯ ದಿನಾಂಕ | 30-04-2017 |
| 4 | ಜಿಲ್ಲಾ ತಪಾಸಣಾ ಸಮಿತಿಯು ಉದ್ದೇಶಿತ ಕಾಲೇಜುಗಳ ಸ್ಥಳ ಪರಿಶೀಲನೆ ನಡೆಸಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ವರದಿ ಸಲ್ಲಿಸುವ ಕೊನೆಯ ದಿನಾಂಕ<br>1. ನಿರ್ದೇಶನ ನೀಡಿದ 15 ದಿನಗಳ ಒಳಗಾಗಿ ಸ್ಥಳ ಪರಿಶೀಲನೆ ನಡೆಸಿ, ತಪಾಸಣಾ ಸಮಿತಿಯು ವರದಿಯನ್ನು ದಾಖಲೆಗಳೊಂದಿಗೆ ಜಿಲ್ಲಾ ಉಪ ನಿರ್ದೇಶಕರಿಗೆ ಸಲ್ಲಿಸುವುದು.<br>2. ತಪಾಸಣಾ ಸಮಿತಿಯು ನೀಡುವ ವರದಿಯನ್ನು ಜಿಲ್ಲಾ ಉಪ ನಿರ್ದೇಶಕರು ಮುಂದಿನ 05 ದಿನಗಳ ಒಳಗಾಗಿ ನಿರ್ದೇಶನಾಲಯಕ್ಕೆ ತಲುಪಿಸುವುದು. | 17-05-2017 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

[ರೇವಯ್ಯ]
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ [ಪ್ರಾಥಮಿಕ]

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ನಿರ್ದೇಶನಾಲಯ, ವಿಕಾಸಸೌಧ, ಬೆಂಗಳೂರು, ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಪ್ರಕಟಿತ 500 ಪ್ರತಿಗಳನ್ನು ಒದಗಿಸಲು.

ಪ್ರತಿ

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ ರಾಜ್ಯ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
4. ನಿರ್ದೇಶಕರು(ಪ್ರೌಢಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು(ಪ್ರಾಥಮಿ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರುಗಳು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಂಬಂಧಪಟ್ಟ ಆಯುಕ್ತರ/ಅಪರ ಆಯುಕ್ತರ ಮುಖಾಂತರ.
8. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರುಗಳಿಗೆ, ನಿರ್ದೇಶಕರು (ಪದವಿ ಪೂರ್ವ ಶಿಕ್ಷಣ ಇಲಾಖೆ) ಮಲ್ಲೇಶ್ವರಂ, ಬೆಂಗಳೂರು ಇವರ ಮುಖಾಂತರ.
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

### ಹೊಸ ಶಾಲೆಗಳ ನೋಂದಣಿಗೆ ನಿಗಧಿಪಡಿಸಲಾದ ವೇಳಾಪಟ್ಟಿ

### 2017-18ನೇ ಸಾಲಿನಲ್ಲಿ 1 ರಿಂದ 5ನೇ ತರಗತಿ ಹಾಗೂ 6 ರಿಂದ 8ನೇ ತರಗತಿಯ ಹೊಸ ಶಾಲೆಗಳಿಗೆ ನೋಂದಣಿ ನೀಡುವ ಸಂಬಂಧ ಅನುಸರಿಸಬೇಕಾದ ವೇಳಾಪಟ್ಟಿ

| ಕ್ರ.ಸಂ | ವಿಷಯ | ನಿಗಧಿಪಡಿಸಿದ ದಿನಾಂಕ |
|---|---|---|
| 1 | ಅರ್ಹ ನೋಂದಾಯಿತ ಸಂಸ್ಥೆಗಳು ಆನ್‌ಲೈನ್‌ನಲ್ಲಿ ಹೊಸ ಶಾಲೆಗಳ ನೋಂದಣಿಗಾಗಿ ಅರ್ಜಿಗಳನ್ನು ಭರ್ತಿಮಾಡಲು ಕಡೆಯ ದಿನಾಂಕ | 31-03-2017 |
| 2 | ಆನ್‌ಲೈನ್‌ನಲ್ಲಿ ಹೊಸ ಶಾಲೆಗಳ ನೋಂದಣಿಗಾಗಿ ಭರ್ತಿಮಾಡಿದ ಅರ್ಜಿಯ ಮುದ್ರಿತ ಪ್ರತಿಯೊಂದಿಗೆ ಪೂರಕ ದಾಖಲೆಗಳನ್ನು ಒಳಗೊಂಡ ಪ್ರಸ್ತಾವನೆಗಳನ್ನು ಆಡಳಿತ ಮಂಡಳಿಗಳು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸಲು ಕಡೆಯ ದಿನಾಂಕ | 07-04-2017 |
| 3 | ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಿಲ್ಲಾ ಉಪನಿರ್ದೇಶಕರಿಗೆ ಪ್ರಸ್ತಾವನೆಯನ್ನು ಭೌತಿಕ ಹಾಗೂ ಆನ್‌ಲೈನ್‌ತಂತ್ರಾಂಶದಲ್ಲಿ ಸಲ್ಲಿಸಲು ಕಡೆಯ ದಿನಾಂಕ | 15-04-2017 |
| 4. | ಉಪನಿರ್ದೇಶಕರು ಹೊಸ ಶಾಲೆಗಳ ನೋಂದಣಿ ಪ್ರಸ್ತಾವನೆಗಳನ್ನು ಭೌತಿಕ ಹಾಗೂ ನೂತನ ಆನ್‌ಲೈನ್‌ತಂತ್ರಾಂಶದಲ್ಲಿ ಪ್ರಚಲಿತ ನಿಯಮಗಳಂತೆ ಇತ್ಯರ್ಥಪಡಿಸಿ ಮಂಜೂರಾತಿ/ತಿರಸ್ಕೃತ ಆದೇಶ ಹೊರಡಿಸಲು ಕಡೆಯ ದಿನಾಂಕ | 17-05-2017 |

### 2017-18ನೇ ಸಾಲಿನಲ್ಲಿ ಹೊಸದಾಗಿ (ಪ್ರತ್ಯೇಕವಾಗಿ) ಪ್ರೌಢ ಶಾಲೆಗಳಿಗೆ ನೋಂದಣಿ ನೀಡುವ ಸಂಬಂಧ ಅನುಸರಿಸಬೇಕಾದ ವೇಳಾಪಟ್ಟಿ

| ಕ್ರ.ಸಂ | ವಿಷಯ | ನಿಗಧಿಪಡಿಸಿದ ದಿನಾಂಕ |
|---|---|---|
| 1 | ಅರ್ಹ ನೋಂದಾಯಿತ ಸಂಸ್ಥೆಗಳು ಆನ್‌ಲೈನ್‌ನಲ್ಲಿ ಹೊಸ ಶಾಲೆಗಳ ನೋಂದಣಿಗಾಗಿ ಅರ್ಜಿಗಳನ್ನು ಭರ್ತಿಮಾಡಲು ಕಡೆಯ ದಿನಾಂಕ | 31-03-2017 |
| 2 | ಆನ್‌ಲೈನ್‌ನಲ್ಲಿ ಹೊಸ ಶಾಲೆಗಳ ನೋಂದಣಿಗಾಗಿ ಭರ್ತಿಮಾಡಿದ ಅರ್ಜಿಯ ಮುದ್ರಿತ ಪ್ರತಿಯೊಂದಿಗೆ ಪೂರಕ ದಾಖಲೆಗಳನ್ನು ಒಳಗೊಂಡ ಪ್ರಸ್ತಾವನೆಗಳನ್ನು ಆಡಳಿತ ಮಂಡಳಿಗಳು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸಲು ಕಡೆಯ ದಿನಾಂಕ | 07-04-2017 |
| 3 | ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಿಲ್ಲಾ ಉಪನಿರ್ದೇಶಕರಿಗೆ ಪ್ರಸ್ತಾವನೆಯನ್ನು ಭೌತಿಕ ಹಾಗೂ ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸಲು ಕಡೆಯ ದಿನಾಂಕ | 15-04-2017 |
| 4 | ಉಪನಿರ್ದೇಶಕರು ಸಂಬಂಧಿಸಿದ ಆಯುಕ್ತಾಲಯಕ್ಕೆ ಪ್ರಸ್ತಾವನೆಯನ್ನು ಭೌತಿಕ ಹಾಗೂ ಆನ್‌ಲೈನ್‌ತಂತ್ರಾಂಶದಲ್ಲಿ ಸಲ್ಲಿಸಲು ಕಡೆಯ ದಿನಾಂಕ | 22-04-2017 |
| 5 | ಸಂಬಂಧಿಸಿದ ಆಯುಕ್ತಾಲಯಗಳಲ್ಲಿ ಹೊಸ ಶಾಲೆಗಳ ನೋಂದಣಿ ಪ್ರಸ್ತಾವನೆಗಳನ್ನು ಭೌತಿಕ ಹಾಗೂ ನೂತನ ಆನ್‌ಲೈನ್‌ತಂತ್ರಾಂಶದಲ್ಲಿ ಪ್ರಚಲಿತ ನಿಯಮಗಳಂತೆ ಇತ್ಯರ್ಥಪಡಿಸಿ ಮಂಜೂರಾತಿ/ತಿರಸ್ಕೃತ ಆದೇಶ ಹೊರಡಿಸಲು | 17-05-2017 |